**All India Radio: Bangalore**
**National Bulletin In Kannada**
**17.05.2026  1.10 p.m.**

ರಾಷ್ಟ್ರೀಯ ವಾರ್ತೆಗಳು
**17.05.2026  1.10 p.m.**
**<><><><>**

ಮುಖ್ಯಾಂಶಗಳು

1. ಪಂಚರಾಷ್ಟ್ರಗಳ ಪ್ರವಾಸದ ಮೂರನೇ ಹಂತದಲ್ಲಿ ಸ್ವಿಡನ್‌ಗೆ ಇಂದು ಪ್ರಧಾನಿ ನರೇಂದ್ರ ಮೋದಿ ಭೇಟಿ
2. ಐದು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ೨೦೨೭ರ ಜನಗಣತಿಯ ಪ್ರಥಮ ಹಂತದ ಮನೆಪಟ್ಟಿ ಮತ್ತು ಗೃಹ ಜನಗಣತಿ ಆರಂಭ
3. ಬೆಂಗಳೂರು- ಮುಂಬೈ ನಡುವೆ ಸಂಚಾರ ಮಾಡಲಿರುವ ಹೊಸ ಎಕ್ಸ್‌ಪ್ರೆಸ್ ರೈಲಿಗೆ ವರ್ಚುವಲ್ ಮೂಲಕ ಚಾಲನೆ ನೀಡಿದ ಸಚಿವ ಅಶ್ವಿನಿ ವೈಷ್ಣವ್
4. ಕಾಂಗೋ ಪ್ರಜಾಸತ್ತಾತ್ಮಕ ಗಣರಾಜ್ಯ ಮತ್ತು ಉಗಾಂಡಾದಲ್ಲಿ ಎಬೋಲಾ ವೈರಸ್ ಪತ್ತೆ; ಅಂತಾರಾಷ್ಟ್ರೀಯ ಸಾರ್ವಜನಿಕ ಆರೋಗ್ಯ ತುರ್ತು ಪರಿಸ್ಥಿತಿ ಘೋಷಿಸಿದ ವಿಶ್ವ ಆರೋಗ್ಯ ಸಂಸ್ಥೆ
5. ಐಪಿಎಲ್ ಟಿ-೨೦ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು- ಪಂಜಾಬ್ ಕಿಂಗ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ - ರಾಜಸ್ತಾನ ರಾಯಲ್ಸ್ ಮುಖಾಮುಖಿ

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಎರಡು ದಿನಗಳ ಸ್ವೀಡನ್ ಭೇಟಿಗಾಗಿ ಗೋಥೆನ್‌ಬರ್ಗ್‌ಗೆ ತಲುಪಲಿದ್ದಾರೆ, ಇದು ಭಾರತ-ಸ್ವೀಡನ್ ಸಂಬಂಧಗಳಲ್ಲಿ ಐತಿಹಾಸಿಕ ಮೈಲಿಗಲ್ಲನ್ನು ಗುರುತಿಸುತ್ತದೆ. ವ್ಯಾಪಾರ, ಹಸಿರು ಪರಿವರ್ತನೆ, ಕೃತಕಬುದ್ಧಿಮತ್ತೆ, ಉದಯೋನ್ಮುಖ ತಂತ್ರಜ್ಞಾನಗಳು, ಸ್ಟಾರ್ಟ್‌ಅಪ್‌ಗಳು, ಸ್ಥಿತಿಸ್ಥಾಪಕ ಪೂರೈಕೆ ಸರಪಳಿಗಳು, ರಕ್ಷಣೆ, ಬಾಹ್ಯಾಕಾಶ, ಹವಾಮಾನ ಕ್ರಮ ಮತ್ತು ಸಹಕಾರವನ್ನು ಪರಿಶೀಲಿಸಲು ಪ್ರಧಾನಿ ನರೇಂದ್ರ ಮೋದಿ, ಸ್ವೀಡಿಷ್ ಪ್ರಧಾನಿ ಉಲ್ಫ್ ಕ್ರಿಸ್ಟರ್ಸನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಯುರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಅವರೊಂದಿಗೆ ಇಬ್ಬರು ನಾಯಕರು ಯುರೋಪಿಯನ್ ರೌಂಡ್ ಟೇಬಲ್ ಫಾರ್ ಇಂಡಸ್ಟ್ರಿಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಈ ಭೇಟಿಯು ಪ್ರಧಾನಿ ನರೇಂದ್ರ ಮೋದಿಯವರ ಯುಎಇ ಮತ್ತು ಯುರೋಪಿಯನ್ ಪ್ರವಾಸದ ಮೂರನೇ ಹಂತವಾಗಿದೆ ಮತ್ತು ಭಾರತ-ಯುರೋಪಿಯನ್ ಮುಕ್ತ ವ್ಯಾಪಾರ ಒಪ್ಪಂದವು ಜನವರಿ ೨೦೨೬ ರಲ್ಲಿ ಜಾರಿಗೆ ಬಂದ ನಂತರ ಅವರ ಮೊದಲ ಯುರೋಪ್ ಭೇಟಿ ಇದಾಗಿದೆ. ನಿನ್ನೆ, ಪ್ರಧಾನಿಯವರ ಪ್ರವಾಸದ ಎರಡನೇ ಹಂತದಲ್ಲಿ, ಪ್ರಧಾನಿ ಮೋದಿ ಮತ್ತು ಡಚ್ ಪ್ರಧಾನಿ ರಾಬ್ ಜೆಟ್ಟನ್ ನಡುವಿನ ಹೇಗ್‌ನಲ್ಲಿ ನಡೆದ ಮಾತುಕತೆಗಳ ನಂತರ, ಭಾರತ ಮತ್ತು ನೆದರ್ಲ್ಯಾಂಡ್ಸ್ ತಮ್ಮ ದ್ವಿಪಕ್ಷೀಯ ಸಂಬಂಧವನ್ನು ಕಾರ್ಯತಂತ್ರದ ಪಾಲುದಾರಿಕೆಗೆ ಏರಿಸಲು ಒಪ್ಪಿಕೊಂಡಿವೆ. ವ್ಯಾಪಾರ, ರಕ್ಷಣೆ, ತಂತ್ರಜ್ಞಾನ, ನೀರು ನಿರ್ವಹಣೆ, ಶುದ್ಧ ಇಂಧನ, ಆರೋಗ್ಯ ರಕ್ಷಣೆ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿನ ಸಹಕಾರವನ್ನು ನಾಯಕರು ಪರಿಶೀಲಿಸಿದರು. ಪ್ರಮುಖ ಕ್ಷೇತ್ರಗಳಲ್ಲಿ ಸಹಯೋಗವನ್ನು ಬಲಪಡಿಸಲು ಹಲವಾರು ಒಪ್ಪಂದಗಳಿಗೆ ಸಹಿ ಹಾಕಲಾಯಿತು. ಪ್ರಧಾನ ಮಂತ್ರಿ ನರೇಂದ್ರ ಮೋದಿ ನೆದರ್ಲ್ಯಾಂಡ್ಸ್ ಅನ್ನು ಭಾರತದ ಪ್ರಮುಖ ಯುರೋಪಿಯನ್ ಪಾಲುದಾರರಲ್ಲಿ ಒಬ್ಬರು ಎಂದು ಬಣ್ಣಿಸಿದರು ಮತ್ತು ಈ ಸಂಬಂಧವು ಹಂಚಿಕೆಯ

ಪ್ರಜಾಪ್ರಭುತ್ವ ಮೌಲ್ಯಗಳು, ಬಲವಾದ ಆರ್ಥಿಕ ಸಂಬಂಧಗಳು ಮತ್ತು ಜನರಿಂದ ಜನರ ಸಂಪರ್ಕಗಳಲ್ಲಿ ಬೇರೂರಿದೆ ಎಂದು ಹೇಳಿದರು. ನಾವೀನ್ಯತೆ, ಸುಸ್ಥಿರತೆ, ಹೂಡಿಕೆ ಮತ್ತು ರಕ್ಷಣಾ ಸಹಕಾರವನ್ನು ವಿಸ್ತರಿಸಲು ಭಾರತದ ವೇಗ ಮತ್ತು ಕೌಶಲ್ಯದೊಂದಿಗೆ ಡಚ್ ಪರಿಣತಿಯನ್ನು ಸಂಯೋಜಿಸುವ ಮೂಲಕ ಉದಯೋನ್ಮುಖ ವಲಯಗಳಲ್ಲಿ ಹೆಚ್ಚಿನ ಸಹಯೋಗಕ್ಕಾಗಿ ಅವರು ಕರೆ ನೀಡಿದರು.

<><><><>

೨೦೨೭ರ ಜನಗಣತಿಯ ಪ್ರಥಮ ಹಂತದ ಮನೆಪಟ್ಟಿ ಮತ್ತು ಗೃಹ ಜನಗಣತಿಯ ಕ್ಷೇತ್ರ ಕಾರ್ಯಾಚರಣೆಗಳು ಐದು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಆರಂಭಗೊಂಡಿವೆ. ಕೇಂದ್ರಾಡಳಿತ ಪ್ರದೇಶಗಳು, ರಾಜಸ್ಥಾನ, ಮೇಘಾಲಯ, ಮಹಾರಾಷ್ಟ್ರ, ಜಾರ್ಖಂಡ್ ಹಾಗೂ ದೆಹಲಿ ಎನ್‌ಸಿಟಿಯ ದೆಹಲಿ ಮಹಾನಗರ ಪಾಲಿಕೆ ಪ್ರದೇಶವಾಗಿವೆ. ಇದೇ ವೇಳೆ, ಗಣತಿದಾರರಿಂದ ಮನೆಮನೆಗೆ ತೆರಳಿ ನಡೆಸುವ ಮನೆಪಟ್ಟಿ ಕಾರ್ಯಾಚರಣೆಗಳು ಪ್ರಸ್ತುತ ಆಂಧ್ರ ಪ್ರದೇಶ, ಅರುಣಾಚಲ ಪ್ರದೇಶ, ಬಿಹಾರ, ಚಂಡೀಗಢ, ಛತ್ತೀಸ್‌ಗಢ, ದಾದ್ರಾ ಮತ್ತು ನಗರ ಹವೇಲಿ ಹಾಗೂ ದಮನ್ ಮತ್ತು ದಿಯು, ಹರಿಯಾಣ, ಮಧ್ಯ ಪ್ರದೇಶ, ಪಂಜಾಬ್, ತೆಲಂಗಾಣ ಮತ್ತು ಉತ್ತರಾಖಂಡ್ ರಾಜ್ಯಗಳಲ್ಲಿ ಪ್ರಗತಿಯಲ್ಲಿವೆ. ಕೇಂದ್ರ ಗೃಹ ಸಚಿವಾಲಯದ ಪ್ರಕಾರ, ಸಮಗ್ರ ಮತ್ತು ನಿಖರ ಮಾಹಿತಿಯನ್ನು ಖಚಿತಪಡಿಸಲು ಮನೆಮನೆಗೆ ತೆರಳಿ ಗಣನೆ ಮಾಡುವ ವಿಧಾನವನ್ನು ಉಳಿಸಿಕೊಂಡೇ, ೨೦೨೭ರ ಜನಗಣತಿಯನ್ನು ಮೊದಲ ಬಾರಿಗೆ ಡಿಜಿಟಲ್ ಸಾಧನಗಳ ಮೂಲಕ ನಡೆಸಲಾಗುತ್ತಿದೆ. ಕ್ಷೇತ್ರ ಭೇಟಿಗಳ ಸಂದರ್ಭದಲ್ಲಿ, ವಸತಿ ಪರಿಸ್ಥಿತಿ, ಕುಟುಂಬದ ವಿವರಗಳು, ಲಭ್ಯವಿರುವ ಸೌಲಭ್ಯಗಳು ಹಾಗೂ ಕುಟುಂಬಗಳ ಸ್ವತ್ತುಗಳಿಗೆ ಸಂಬಂಧಿಸಿದ ಮಾಹಿತಿಯನ್ನು ೩೩ ಅಧಿಸೂಚಿತ ಪ್ರಶ್ನೆಗಳನ್ನೊಳಗೊಂಡ ಸಂರಚಿತ ಪ್ರಶ್ನಾವಳಿಯ ಮೂಲಕ ಸಂಗ್ರಹಿಸಲಾಗುತ್ತಿದೆ. ಸಚಿವಾಲಯದ ಪ್ರಕಾರ, ಸ್ವಯಂ-ಗಣನೆ ಸೌಲಭ್ಯವು ಇಂದು ಗುಜರಾತ್, ಜಮ್ಮು ಮತ್ತು ಕಾಶ್ಮೀರ, ಲಡಾಖ್ ಮತ್ತು ಪುದುಚೇರಿಯಲ್ಲಿ ಆರಂಭಗೊಂಡಿದ್ದು, ಈ ತಿಂಗಳ ೩೧ರವರೆಗೆ ಲಭ್ಯವಿರುತ್ತದೆ. ಉತ್ತರ ಪ್ರದೇಶದಲ್ಲಿಯೂ ಈ ಸ್ವಯಂ-ಗಣನೆ ಸೌಲಭ್ಯ ಪ್ರಸ್ತುತ ನಡೆಯುತ್ತಿದ್ದು, ಮೇ ೨೧ರವರೆಗೆ ಮುಂದುವರಿಯಲಿದೆ. ಜನಗಣತಿ ಕಾರ್ಯಾಚರಣೆಯಲ್ಲಿ ಮೊದಲ ಬಾರಿಗೆ ಪರಿಚಯಿಸಲಾದ ಈ ಸ್ವಯಂ-ಗಣನೆ ಸೌಲಭ್ಯಕ್ಕೆ ಸಾರ್ವಜನಿಕರಿಂದ ಉತ್ತೇಜನಕಾರಿ ಪ್ರತಿಕ್ರಿಯೆ ದೊರೆಯುತ್ತಿದೆ. ಈಗಾಗಲೇ ೨೫ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಒಂದು ಕೋಟಿ ೪೪ ಲಕ್ಷಕ್ಕೂ ಹೆಚ್ಚು ಕುಟುಂಬಗಳು ಅಧಿಕೃತ ಪೋರ್ಟಲ್ ಮೂಲಕ ಸ್ವಯಂ-ಗಣನೆ ಪೂರ್ಣಗೊಳಿಸಿವೆ. ಈ ಉಪಕ್ರಮವು, ಜನಗಣತಿ ಕಾರ್ಯಾಚರಣೆಗಳ ಡಿಜಿಟಲೀಕರಣದತ್ತ ಮಹತ್ವದ ಹೆಜ್ಜೆಯಾಗಿದ್ದು, ಜನರಿಗೆ ಜನಗಣತಿ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅನುಕೂಲಕರ ಮತ್ತು ಸುರಕ್ಷಿತ ವೇದಿಕೆಯನ್ನು ಒದಗಿಸುತ್ತದೆ.

<><><><>

ಬೆಂಗಳೂರು- ಮುಂಬೈ ನಡುವೆ ಸಂಚಾರ ಮಾಡಲಿರುವ ಹೊಸ ಎಕ್ಸ್ಪ್ರೆಸ್ ರೈಲಿಗೆ ಬೆಂಗಳೂರಿನ ಬೈಯ್ಯಪ್ಪನಹಳ್ಳಿ ಬಳಿಯ ಎಸ್‌ಎಂವಿಟಿ ರೈಲ್ವೇ ನಿಲ್ದಾಣದಲ್ಲಿ ಚಾಲನೆ ನೀಡಲಾಗಿದೆ. ವರ್ಚುವಲ್ ಮೂಲಕ ಕೇಂದ್ರ ರೈಲ್ವೇ ಸಚಿವ ಅಶ್ವಿನಿ ವೈಷ್ಣವ್ ರೈಲು ಸೇವೆಗೆ ಚಾಲನೆ ನೀಡಿದರು, ರೈಲ್ವೆ ನಿಲ್ದಾಣದಲ್ಲಿ ಕೇಂದ್ರ ರೈಲ್ವೇ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ, ಸಂಸದರಾದ ಪಿಸಿ ಮೋಹನ್ ರೈಲಿಗೆ ಹಸಿರು ನಿಶಾನೆ ತೋರಿದರು. ಬೆಂಗಳೂರಿನ ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್‌ನಿಂದ ಮುಂಬೈನ ಲೋಕಮಾನ್ಯ ತಿಲಕ್ ಟರ್ಮಿನಲ್ ನಡುವೆ ವಾರಕ್ಕೆ ಎರಡು ದಿನ

ಬೆಂಗಳೂರಿನಿಂದ ಮುಂಬೈ ನಡುವೆ ಈ ಎಕ್ಸ್ಪ್ರೆಸ್ ರೈಲು ಸಂಚಾರ ಮಾಡಲಿದೆ. ಈ ರೈಲು ಶನಿವಾರ ಮತ್ತು ಮಂಗಳವಾರದಂದು ಬೆಂಗಳೂರಿನಿಂದ ಮುಂಬೈಗೆ, ಭಾನುವಾರ ಮತ್ತು ಬುಧವಾರ ಮುಂಬೈನಿಂದ ಬೆಂಗಳೂರಿಗೆ ಓಡಾಟ ನಡೆಸಲಿದೆ. ಬೆಂಗಳೂರು, ಉತ್ತರ ಕರ್ನಾಟಕದ ಹುಬ್ಬಳ್ಳಿ- ಧಾರವಾಡ, ಬೆಳಗಾವಿ, ಮಹಾರಾಷ್ಟ್ರದ ಪುಣೆ, ಮುಂಬೈ ನಗರಗಳ ನಡುವೆ ಸಂಪರ್ಕ ಕಲ್ಪಿಸಲಿದೆ.

<><><>

ಕಾಂಗೋ ಪ್ರಜಾಸತ್ತಾತ್ಮಕ ಗಣರಾಜ್ಯ ಮತ್ತು ಉಗಾಂಡಾದಲ್ಲಿ ಏಕಾಏಕಿ ಎಬೋಲಾ ವೈರಸ್ ಉಂಟಾಗಿರುವುದನ್ನು ಅಂತಾರಾಷ್ಟ್ರೀಯ ಸಾರ್ವಜನಿಕ ಆರೋಗ್ಯ ತುರ್ತು ಪರಿಸ್ಥಿತಿ ಎಂದು ವಿಶ್ವ ಆರೋಗ್ಯ ಸಂಸ್ಥೆ-ಡಬ್ಲ್ಯುಎಚ್‌ಒ ಘೋಷಿಸಿದೆ. ಡಬ್ಲ್ಯುಎಚ್‌ಒ ಮಹಾನಿರ್ದೇಶಕ ಟೆಡ್ರೊಸ್ ಅಧಾನೊಮ್ ಘೆಬ್ರೆಯೆಸಸ್, ೩೦೦ ಕ್ಕೂ ಹೆಚ್ಚು ಶಂಕಿತ ಪ್ರಕರಣಗಳು ಮತ್ತು ೮೮ ಸಾವುಗಳು ಈ ದೇಶಗಳಲ್ಲಿ ವರದಿಯಾದ ನಂತರ ಈ ನಿರ್ಧಾರವನ್ನು ಪ್ರಕಟಿಸಿದ್ದಾರೆ. ಕೋವಿಡ್-೧೯ ರಂತಹ ಸಾಂಕ್ರಾಮಿಕ ತುರ್ತು ಪರಿಸ್ಥಿತಿಯನ್ನು ಎಬೋಲಾ ವೈರಸ್ ಹೊಂದಿಲ್ಲ ಎಂದು ಡಬ್ಲ್ಯುಎಚ್‌ಒ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸ್ಪಷ್ಟಪಡಿಸಿದೆ ಮತ್ತು ಅಂತಾರಾಷ್ಟ್ರೀಯ ಗಡಿಗಳನ್ನು ಮುಚ್ಚದಂತೆ ಕೂಡ ಸಲಹೆ ನೀಡಿದೆ. ಈ ಎಬೋಲಾ ವೈರಸ್ ಅಪರೂಪದ ಬುಂಡಿಬುಗ್ಯೊ ತಳಿಗೆ ಸೇರಿದೆ ಎಂದು ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ. ಇದಕ್ಕೆ ಪ್ರಸ್ತುತ ಯಾವುದೇ ಅನುಮೋದಿತ ಲಸಿಕೆಗಳು ಅಥವಾ ಚಿಕಿತ್ಸೆಗಳಿಲ್ಲ. ಎಬೋಲಾ ದೈಹಿಕ ದ್ರವಗಳ ಸಂಪರ್ಕದ ಮೂಲಕ ಹರಡುತ್ತದೆ ಮತ್ತು ತೀವ್ರ ಮತ್ತು ಹೆಚ್ಚಾಗಿ ಮಾರಕ ಕಾಯಿಲೆಗೆ ಕಾರಣವಾಗಬಹುದು. ಹೆಚ್ಚಿನ ಪ್ರಕರಣಗಳು ಕಾಂಗೋದಲ್ಲಿ ವರದಿಯಾಗಿವೆ, ನೆರೆಯ ಉಗಾಂಡಾದಲ್ಲಿ ಎರಡು ಪ್ರಕರಣಗಳು ದೃಢಪಟ್ಟಿವೆ ಎನ್ನಲಾಗಿದೆ.

<><><>

ಇಂದು ಜಾಗತಿಕವಾಗಿ 'ವಿಶ್ವ ಅಧಿಕ ರಕ್ತದೊತ್ತಡ ದಿನ' ಆಚರಿಸಲಾಗುತ್ತಿದೆ. ಈ ದಿನವು ಅಧಿಕ ರಕ್ತದೊತ್ತಡ ಜಾಗೃತಿ ಮಾಸದ ಒಂದು ಭಾಗವಾಗಿದ್ದು, ಅಧಿಕ ರಕ್ತದೊತ್ತಡದ ಬಗ್ಗೆ ಜಾಗತಿಕ ಜಾಗೃತಿ ಮೂಡಿಸುವುದು, ತಡೆಗಟ್ಟುವಿಕೆ, ಪತ್ತೆ ಮತ್ತು ನಿಯಂತ್ರಣವನ್ನು ಉತ್ತೇಜಿಸುವುದು ಹಾಗೂ ವ್ಯಕ್ತಿ, ಸಮುದಾಯ ಮತ್ತು ಆರೋಗ್ಯ ವ್ಯವಸ್ಥೆಯ ಮಟ್ಟದಲ್ಲಿ ಕ್ರಮವನ್ನು ಪ್ರೋತ್ಸಾಹಿಸುವ ಗುರಿ ಹೊಂದಿದೆ. ಈ ವರ್ಷದ ಥೀಮ್ "ಒಟ್ಟಿಗೆ ಅಧಿಕ ರಕ್ತದೊತ್ತಡವನ್ನು ನಿಯಂತ್ರಿಸುವುದು: ನಿಮ್ಮ ರಕ್ತದೊತ್ತಡವನ್ನು ನಿಯಮಿತವಾಗಿ ಪರಿಶೀಲಿಸಿ, ಮೂಕ ಕೊಲೆಗಾರನನ್ನು ಸೋಲಿಸಿ" ಎಂಬುದಾಗಿದೆ.

<><><>

ಇಂದು ವಿಶ್ವದಾದ್ಯಂತ ವಿಶ್ವ ದೂರಸಂಪರ್ಕ ಮತ್ತು ಮಾಹಿತಿ ಸಮಾಜ ದಿನವನ್ನು ಆಚರಿಸಲಾಗುತ್ತಿದೆ. ಈ ದಿನ ೧೮೬೫ರಲ್ಲಿ ಪ್ಯಾರಿಸ್‌ನಲ್ಲಿ ಸ್ಥಾಪಿತವಾದ ಸಂಯುಕ್ತ ರಾಷ್ಟ್ರಗಳ ಡಿಜಿಟಲ್ ತಂತ್ರಜ್ಞಾನ ಸಂಸ್ಥೆ-ಐಟಿಯು ಸ್ಥಾಪನೆಯನ್ನು ಸ್ಮರಿಸುತ್ತದೆ. ಈ ವರ್ಷದ ಘೋಷವಾಕ್ಯ "ಡಿಜಿಟಲ್ ಜೀವನಾಡಿಗಳು: ಸಂಪರ್ಕಿತ ಜಗತ್ತಿನಲ್ಲಿ ಸ್ಥಿತಿಸ್ಥಾಪಕತ್ವವನ್ನು ಬಲಪಡಿಸುವುದು." ಎಂಬುದಾಗಿದೆ. ಈ ದಿನದ ಉದ್ದೇಶವೆಂದರೆ ಅಂತರ್ಜಾಲ ಮತ್ತು ಇತರೆ ಮಾಹಿತಿ ಹಾಗೂ ಸಂವಹನ ತಂತ್ರಜ್ಞಾನಗಳು ಸಮಾಜ ಮತ್ತು ಆರ್ಥಿಕತೆಗೆ ತರಬಹುದಾದ ಸಾಧ್ಯತೆಗಳ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಡಿಜಿಟಲ್ ಅಂತರವನ್ನು ಕಡಿಮೆ ಮಾಡುವ ಮಾರ್ಗಗಳನ್ನು ಉತ್ತೇಜಿಸುವುದಾಗಿದೆ.

<><><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಇದೇ ೩೧ ರಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್‌ನ' ೧೩೪ ನೇ ಆವೃತ್ತಿಯಾಗಿದೆ. ಕೇಳುಗರು ಉಚಿತ ದೂರವಾಣಿ ಸಂಖ್ಯೆ ೧೮೦೦-೧೧-೭೮೦೦ ಮೂಲಕ ಕಾರ್ಯಕ್ರಮಕ್ಕಾಗಿ ತಮ್ಮ ಆಲೋಚನೆಗಳು ಮತ್ತು ಸಲಹೆಗಳನ್ನು ಕಳುಹಿಸಬಹುದಾಗಿದೆ. ನರೇಂದ್ರ ಮೋದಿ ಅಪ್ಲಿಕೇಶನ್ ಅಥವಾ MyGov ಓಪನ್ ಫೋರಂ ಮೂಲಕ ಆನ್‌ಲೈನ್‌ನಲ್ಲಿಯೂ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದು.

<><><><>

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಎರಡು ಪಂದ್ಯಗಳು ನಡೆಯಲಿವೆ. ಧರ್ಮಶಾಲಾದಲ್ಲಿ ನಡೆಯಲಿರುವ ಮೊದಲ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯುವ ದಿನದ ಎರಡನೇ ಪಂದ್ಯದಲ್ಲಿ, ಡೆಲ್ಲಿ ಕ್ಯಾಪಿಟಲ್ಸ್ ಮತ್ತು ರಾಜಸ್ತಾನ ರಾಯಲ್ಸ್ ತಂಡಗಳು ಸೆಣಸಲಿವೆ. ಪಂದ್ಯ ರಾತ್ರಿ ೭.೩೦ ಕ್ಕ ಆರಂಭವಾಗಲಿದೆ.

<><><><>

ದೆಹಲಿ ಸರ್ಕಾರವು, ರಾಷ್ಟ್ರ ರಾಜಧಾನಿಯಲ್ಲಿ ವಾಯುಯಾನ ಟರ್ಬೈನ್ ಇಂಧನದ ಮೇಲಿನ ಮೌಲ್ಯವರ್ಧಿತ ತೆರಿಗೆಯನ್ನು ಶೇಕಡಾ ೨೫ ರಿಂದ ಶೇಕಡಾ ೭ ಕ್ಕೆ ಇಳಿಸುವ ಮಹತ್ವದ ನಿರ್ಧಾರವನ್ನು ತೆಗೆದುಕೊಂಡಿದೆ. ವಿಮಾನಯಾನ ವಲಯಕ್ಕೆ ಉತ್ತೇಜನ ನೀಡುವ, ಪ್ರವಾಸೋದ್ಯಮ ಮತ್ತು ಲಾಜಿಸ್ಟಿಕ್ಸ್ ಚಟುವಟಿಕೆಗಳನ್ನು ಉತ್ತೇಜಿಸುವ ಉದ್ದೇಶದಿಂದ ಸಂಪರ್ಕ ಮತ್ತು ಆರ್ಥಿಕ ಚಟುವಟಿಕೆಯನ್ನು ಬಲಪಡಿಸುವ ಪ್ರಧಾನಿ ನರೇಂದ್ರ ಮೋದಿಯವರ ಮಹತ್ವದ ಆದ್ಯತೆಗೆ ಅನುಗುಣವಾಗಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಹೇಳಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>